ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕಾವೇರಿ ನೀರಾವರಿ ನಿಗಮ ನಿಯಮಿತದಿಂದ ಕೈಗೊಂಡಿರುವ ಕಾಮಗಾರಿಗಳ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

302 (354) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ 3 ವರ್ಷಗಳಲ್ಲಿ ಕಾವೇರಿ ನೀರಾವರಿ ನಿಗಮದಿಂದ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿರುವ ಕಾಮಗಾರಿಗಳು ಯಾವುವು; ಕಾಮಗಾರಿಗಳವಾರು ಆದ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಕಾವೇರಿ ನೀರಾವರಿ ನಿಗಮದಿಂದ ಹಾಸನ ಜಿಲ್ಲೆಯಲ್ಲಿ ಕೈಗೊಂಡಿರುವ ಸಮುದಾಯ ಭವನ ನಿರ್ಮಾಣ/ರಸ್ತೆ ನಿರ್ಮಾಣ ಕಾಮಗಾರಿಗಳು ಯಾವುವು; ಕಾಮಗಾರಿಗಳಿಗಾದ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)